**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಡೂರು**

**ಸಿಸಿ. ನಂ.3251/2024**

ಫಿರ್ಯಾದಿ : **ಅಬಕಾರಿ ನಿರೀಕ್ಷಕರು**

ವಿರುದ್ಧ

ಆರೋಪಿ : **ಕೃಷ್ಣನಾಯ್ಕ ಬಿನ್ ರಾಮಾನಾಯ್ಕ,**
ವಯಸ್ಸು ಸುಮಾರು 55 ವರ್ಷ,
ಕೂಲಿ, ವಾಸಃ ಸೇವಾನಗರ ಗ್ರಾಮ,
ಕಡೂರು ತಾಲ್ಲೂಕು.

**ದೋಷಾರೋಪಣೆ**

ಶ್ರೀಮತಿ ಸವಿತರಾಣಿ ಹೆಚ್.ವಿ., ಬಿ.ಎ.ಎಲ್., ಎಲ್.ಎಲ್.ಬಿ., 2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ಕಡೂರು, ಆದ ನಾನು ಈ ಮೂಲಕ ಕೆಳಕಂಡಂತೆ ಆಪಾದಿತರಾದ ನಿಮ್ಮ ಮೇಲೆ ಹೊರೆಸುವ ದೋಷಾರೋಪಣೆ.

ದಿನಾಂಕಃ 20.03.2024 ರಂದು ಕರ್ನಾಟಕ ಸಾರ್ವತ್ರಿಕ ಲೋಕಸಭಾ ಚುನಾವಣೆ - 2024 ರ ಚುನಾವಣಾ ನೀತಿ ಸಂಹಿತೆ ಜಾರಿ ಹಿನ್ನೆಲೆಯಲ್ಲಿ ಅಬಕಾರಿ ಅಕ್ರಮಗಳನ್ನು ತಡೆಗಟ್ಟುವಿಕೆ ಮತ್ತು ನಿಯಂತ್ರಣಕ್ಕೆ ಸಂಬಂಧಿಸಿದಂತೆ ಮಾನ್ಯ ಅಬಕಾರಿ ಉಪ ಆಯುಕ್ತರು, ಚಿಕ್ಕಮಗಳೂರು ರವರ ನಿರ್ದೇಶನದ ಮೇರೆಗೆ, ಕಡೂರು ವಲಯದ ಅಬಕಾರಿ ಉಪನಿರೀಕ್ಷಕರು ಅವರ ಸಿಬ್ಬಂದಿಗಳೊಂದಿಗೆ ಗಸ್ತು ನಿರ್ವಹಿಸುತ್ತಿದ್ದಾಗ, ಅವರಿಗೆ ಬಂದ ಮಾಹಿತಿ ಮೇರೆಗೆ ಸಂಜೆ 6.00 ಗಂಟೆ ಸಮಯದಲ್ಲಿ ಕಡೂರು ನಗರದ ಎನ್.ಹೆಚ್.- 206 ರಸ್ತೆಯಲ್ಲಿ ಬರುವ ದತ್ತಾತ್ರೇಯ ನಗರದ ಕ್ರಾಸ್ ಬಳಿ ಆರೋಪಿಯಾದ ನೀವು ಕೆಎ-18 ಬಿ 7406 ಪ್ಯಾಸೆಂಜರ್ ಆಟೋ ವಾಹನದ ಸೀಟ್ ಮೇಲೆ ಒಂದು ಬಿಳಿ ಚೀಲದಲ್ಲಿ 90 ಎಂ.ಎಲ್.ನ 144 ರಾಜಾವಿಸ್ಕಿ ಸ್ಯಾಚೆಟ್ ಗಳನ್ನು ಯಾವುದೇ ಪರವಾನಗಿಯನ್ನು ಹೊಂದದೇ ಅಕ್ರಮವಾಗಿ ಹೊಂದಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ 11, 14 (2), 32 (1), 38

(ಎ) ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯ ಒಳಗೆ ಮಾಡಿರುವಿರಿ.

ಆದ್ದರಿಂದ, ಆರೋಪಿಯಾದ ನೀವು ಮೇಲ್ಕಂಡ ದಂಡನೀಯ ಅಪರಾಧಗಳ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಒಳಪಡತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

1. ನಿಮಗೆ ಈಗ ಓದಿ ಹೇಳಿದ ಆರೋಪವು ತಿಳಿಯಿತೆ?

ಉ:- ಹೌದು

2. ನಿಮ್ಮ ಮೇಲೆ ಇರುವ ಆರೋಪವನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕೆ?

ಉ:- ಇಲ್ಲ, ವಿಚಾರಣೆಯಾಗಬೇಕು

ದಿನಾಂಕ: 29.10.2024

-ಸಹಿ-

**(ಶ್ರೀಮತಿ ಸವಿತರಾಣಿ ಹೆಚ್.ವಿ.)**
**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆಎಂಎಫ್‌ಸಿ, ಕಡೂರು.**